**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

ಸಂಖ್ಯೆ:ಕಪಂರಾಆ/ಅಭಿವೃದ್ಧಿ/ಜ.ಮ/06/2024 ದಿನಾಂಕ:26.06.2024

**ಇವರಿಗೆ,**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು,

**ಮಾನ್ಯರೇ,**

**ವಿಷಯ:-** ಗ್ರಾಮ ಪಂಚಾಯತಿ ಕಾರ್ಯದರ್ಶಿಗಳನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಿಸಿದ್ದು, ಗ್ರಾಮ ಪಂಚಾಯಿತಿಗಳಲ್ಲಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸುವ ಬಗ್ಗೆ.

**ಉಲ್ಲೇಖ:-** ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್ 02 ಎಸ್ಎಸ್ಎಂ 2022,
1. ದಿನಾಂಕ:07.03.2024
2. ಸುತ್ತೋಲೆ ಸಂಖ್ಯೆ:ಅಸಾನಿ/11/ಜಮನೋ/2024, ದಿನಾಂಕ :14.03.2024
3. ಜನನ, ಮರಣಗಳ, ಮುಖ್ಯ ನೋಂದಾಣಾಧಿಕಾರಿಗಳ ಕಛೇರಿ ಸುತ್ತೋಲೆ ಸಂಖ್ಯೆ:ಅಸಾನಿ/11/ಜಮನೋ/2024, ದಿನಾಂಕ :24.06.2024
4. ಜನನ, ಮರಣಗಳ, ಮುಖ್ಯ ನೋಂದಾಣಾಧಿಕಾರಿಗಳ ಕಛೇರಿ ಪತ್ರ ಸಂಖ್ಯೆ:ಅಸಾನಿ/11/ಜಮನೋ/2024, ದಿನಾಂಕ :24.06.2024
5. ದಿನಾಂಕ:26.06.2024 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ವಿಡಿಯೋ ಸಂವಾದದ ಸಭೆಯ ನಿರ್ದೇಶನಗಳಂತೆ

*****

ಗ್ರಾಮ ಪಂಚಾಯತಿ ಕಾರ್ಯದರ್ಶಿಗಳನ್ನು ಜನನ ಮರಣ ಉಪನೋಂದಣಾಧಿಕಾರಿಗಳಾಗಿ ನೇಮಿಸಲಾಗಿದ್ದು, ಈಗಾಗಲೇ ಜಿಲ್ಲೆಗಳಲ್ಲಿ ತರಬೇತಿಯನ್ನು ನೀಡಲಾಗಿರುತ್ತದೆ. ಮುಂದುವರೆದು, ಗ್ರಾಮ ಪಂಚಾಯತಿಗಳಲ್ಲಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿದ್ದು, ಎಲ್ಲಾ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು (DSC) Digital Signature Certificate ಪಡೆದಿರುವ ಬಗ್ಗೆ ಜಿಲ್ಲಾ ಪಂಚಾಯತಿಗಳಿಂದ ಮಾಹಿತಿ ಸ್ವೀಕೃತವಾಗಿರುತ್ತದೆ. ಉಲ್ಲೇಖ (2) ರ ಸುತ್ತೋಲೆಯಲ್ಲಿ. ದಿನಾಂಕ:01.07.2024 ರಿಂದ ಜಾರಿಗೆ ಬರುವಂತೆ ಉಲ್ಲೇಖ (1) ರ ಸರ್ಕಾರದ ಆದೇಶವನ್ನು ಗ್ರಾಮೀಣ ಪ್ರದೇಶಕ್ಕೆ ಅನ್ವಯವಾಗುವಂತೆ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಲಾಗಿದೆ. ಅದರಂತೆ, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಜನನ, ಮರಣ ಉಪ ನೋಂದಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಲು ಪ್ರಾರಂಭಿಸುವುದು. ಉಲ್ಲೇಖ (5) ರ ಸಭೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರು ನೀಡಿದ ನಿರ್ದೇಶನಗಳಂತೆ ಯಶಸ್ವಿ ಅನುಷ್ಠಾನಕ್ಕಾಗಿ ಈ ಕೆಳಕಂಡ ಅಂಶಗಳ ಬಗ್ಗೆ ಕ್ರಮವಹಿಸಲು ಕೋರಿದೆ.

- ಪ್ರತೀ ಜಿಲ್ಲಾ ಪಂಚಾಯಿತಿಯಿಂದ ಎಲ್ಲಾ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು (DSC) Digital Signature Certificate ಪಡೆದಿರುವುದಾಗಿ ಮಾಹಿತಿ ಲಭ್ಯವಾಗಿರುತ್ತದೆ. ಈ ವ್ಯವಸ್ಥೆಯಲ್ಲಿ ಯಾವುದೇ ಅಡೆತಡೆಯಿಲ್ಲದೇ ಕಾರ್ಯನಿರ್ವಹಿಸುವ ಸಲುವಾಗಿ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಹುದ್ದೆಗಳನ್ನು ಖಾಲಿ ಇಡದಂತೆ ಗ್ರಾಮ ಪಂಚಾಯತಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರು/ಅಕ್ಕ ಪಕ್ಕದ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಿಗೆ ಪ್ರಭಾರವನ್ನು ನೀಡತಕ್ಕದ್ದು. ಹುದ್ದೆಗಳು ಯಾವುದೇ ಕಾರಣಕ್ಕೂ ಖಾಲಿಇರದಂತೆ ಖಾತರಿಪಡಿಸಿಕೊಳ್ಳತಕ್ಕದ್ದು.

- ಉಲ್ಲೇಖ (4) ರ ಪತ್ರದಂತೆ, ಇ-ಜನ್ಮ ತಂತ್ರಾಂಶದಲ್ಲಿ ದಾಖಲಿಸುವ ಸಲುವಾಗಿ ಗ್ರಾಮ ಪಂಚಾಯತಿಗಳಿಗೆ USER ID ಮತ್ತು PASS WORD ಗಳನ್ನು ಇ-ಮೇಲ್ ಮೂಲಕ ಸಂಬಂಧಿಸಿದ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿರುತ್ತದೆ. ಸದರಿ USER ID ಗಳಿಗೆ ಸಂಬಂಧಿಸಿದಂತೆ, ಗ್ರಾಮ ಪಂಚಾಯಿತಿವಾರು ಗ್ರಾಮ ಪಂಚಾಯತಿ ಕಾರ್ಯದರ್ಶಿಯವರ ಮತ್ತು Data Entry Operator ವಿವರಗಳಾದ ಹೆಸರು, ಮೊಬೈಲ್ ಸಂಖ್ಯೆ ಹಾಗೂ ಆಧಾರ್ ಕಾರ್ಡ್ ನ ಕೊನೆಯ 04 ಸಂಖ್ಯೆಗಳನ್ನು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಲಾಗಿನ್‌ನಲ್ಲಿ Update ಮಾಡಿ ವಿತರಿಸಬೇಕು. ಇದಕ್ಕಾಗಿ ಜರುಗಿಸಬೇಕಾದ ಕ್ರಮಗಳು ಈ ಕೆಳಕಂಡಂತಿವೆ.

    - ಈ ಕಾರ್ಯವನ್ನು ಪ್ರತಿ ಜಿಲ್ಲಾ ಪಂಚಾಯತಿ ಕಛೇರಿಯಲ್ಲಿ ಆಯೋಜಿಸತಕ್ಕದ್ದು.
    - ಸುಗಮ ವಿತರಣೆಗಾಗಿ ತಾಲ್ಲೂಕುವಾರು ವೇಳಾ ಪಟ್ಟಿಯನ್ನು ನಿಗದಿಪಡಿಸಿಕೊಂಡು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಿಗೆ ಹಾಜರಿರಲು ಸೂಚಿಸುವುದು.
    - ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಹಾಗೂ ಕಛೇರಿ ಸಿಬ್ಬಂದಿಯೊಂದಿಗೆ ಜಿಲ್ಲಾ ಪಂಚಾಯತಿ DPM ರವರು ಸಹಕರಿಸಿ ದಿನಾಂಕ:27.06.2024 ರೊಳಗಾಗಿ ವಿತರಿಸಲು ಕ್ರಮವಹಿಸುವುದು.
    - ಗ್ರಾಮ ಪಂಚಾಯಿತಿಗಳಲ್ಲಿ ಜನನ ಮರಣ ನೋಂದಣಿ ಕೈಗೊಳ್ಳುತ್ತಿರುವ ಬಗ್ಗೆ ವ್ಯಾಪಕ ಪ್ರಚಾರವನ್ನು ಪತ್ರಿಕಾ ಪ್ರಕಟಣೆಯ ಮೂಲಕ ಕೈಗೊಳ್ಳುವುದು. ಸ್ಥಳೀಯ ಟಿವಿ ಚಾನಲ್ ಗಳಲ್ಲಿ ಮಾಹಿತಿಯನ್ನು ಪ್ರಚುರ ಪಡಿಸುವುದು. ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛವಾಹಿನಿಗಳ ಮೂಲಕವು ಈ ಮಾಹಿತಿಯ ಪ್ರಚಾರಕ್ಕೆ ಕ್ರಮವಹಿಸುವುದು.

- ಗ್ರಾಮ ಪಂಚಾಯತಿ ಕಾರ್ಯಾಲಯದ ಮುಂದೆ ಕನ್ನಡ/ಆಂಗ್ಲ ಭಾಷೆಯಲ್ಲಿ ಜನನ, ಮರಣ ಉಪ ನೋಂದಣಾಧಿಕಾರಿಗಳ ಕಾರ್ಯಾಲಯದ ಹೆಸರು ಮತ್ತು ಕಛೇರಿಯ ವೇಳೆಯನ್ನು ಸ್ಪಷ್ಟವಾಗಿ ನಮೂದಿಸಿದ ನಾಮ ಫಲಕವನ್ನು ಅಳವಡಿಸುವುದು. ಈಗಾಗಲೇ ಮಾದರಿಯನ್ನು ತರಬೇತಿ ಸಂದರ್ಭದಲ್ಲಿ ಎಲ್ಲಾ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಿಗೆ ನೀಡಲಾಗಿದೆ.

- ಜನನ ಮರಣ ಮತ್ತು ನಿರ್ಜೀವ ಜನನಗಳ ನೋಂದಣಿ ಮಾಡುವ ಸಂದರ್ಭದಲ್ಲಿ ಇ-ಜನ್ಮ ತಂತ್ರಾಂಶದಲ್ಲಿ ತಾಂತ್ರಿಕ ಸಮಸ್ಯೆಗಳು ಕಂಡು ಬಂದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಛೇರಿ ಅಥವಾ ಇ-ಜನ್ಮ ಸಹಾಯವಾಣಿ ಹಾಗೂ ಇ-ಮೇಲ್ crbdkar@gmail.com / ejanmahelpdesk@gmail.com ಮತ್ತು ದೂರವಾಣಿ **1800-425-6578** ಕ್ಕೆ ಸಂಪರ್ಕಿಸಬಹುದು.

- ಹೆಚ್ಚಿನ ಮಾಹಿತಿ, ಸಲಹೆ ಮತ್ತು ಪರಿಹಾರಗಳಿಗಾಗಿ ಜನನ, ಮರಣ ಮುಖ್ಯ ನೋಂದಣಾಧಿಕಾರಿಗಳ ಕಛೇರಿಯ ಶ್ರೀ ಎಸ್.ಕೆ. ಚಿಕ್ಕಬೀರಯ್ಯ, ಜಂಟಿ ನಿರ್ದೇಶಕ ರವರನ್ನು ಸಂಪರ್ಕಿಸಬಹುದಾಗಿರುತ್ತದೆ. ದೂರವಾಣಿ ಸಂಖ್ಯೆ:080 – 2286 9741, ಮೊಬೈಲ್ ದೂರವಾಣಿ ಸಂಖ್ಯೆ:9945910867.

ತಮ್ಮ ವಿಶ್ವಾಸಿ,

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಪ್ರತಿಯನ್ನು:**

1. ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿ, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಹಾಗೂ ಅಪರ ಜಿಲ್ಲಾ ಜನನ, ಮರಣ ನೋದಣಾಧಿಕಾರಿಗಳು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ, ಪಂಚಾಯಿತಿ ಕಾರ್ಯದರ್ಶಿಗಳಿಗೆ ( ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, , ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತಸಹಾಯಕರು, ಬೆಂಗಳೂರು.
5. ಕಛೇರಿ ಪ್ರತಿ.